RNU AIR DHARWAD

# JUNE 5, 2025
# ALL INDIA RADIO- DHARWAD
# PRADESH SAMACHARA (KANNADA) 7:05 AM

- ಆರ್‌ಸಿಬಿ ತಂಡದ ವಿಜಯೋತ್ಸವ: ಸಂಭ್ರಮಾಚರಣೆ ವೇಳೆ ದುರಂತ: ಕಾಲ್ತುಳಿತಕ್ಕೆ ಸಿಕ್ಕು 11 ಸಾವು, 40ಕ್ಕೂ ಹೆಚ್ಚು ಜನರಿಗೆ ಗಾಯ.

- ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು ನಾಡಿನ ಜನರಿಗೆ ಭರವಸೆಯ ಬೆಳಕು– ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ.

- ರಾಜ್ಯದ ವಿವಿಧೆಡೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ–ಅಭಿಯಾನದ ಮಹತ್ವ ಕುರಿತು ರೈತರಿಗೆ ಜಾಗೃತಿ.

- ಇಂದು, ವಿಶ್ವ ಪರಿಸರ ದಿನ. ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ರಾಜ್ಯಾದ್ಯಂತ ಆಚರಣೆ.

ಈಗ ವಾರ್ತೆಗಳ ವಿವರ

*******

ಐ.ಪಿ.ಎಲ್. ಕ್ರಿಕೆಟ್ ಟೂರ್ನಿಯಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಪ್ರಶಸ್ತಿ ಮುಡಿಗೇರಿಸಿಕೊಂಡ ಹಿನ್ನೆಲೆ, ತಂಡದ ಆಟಗಾರರನ್ನು ನಿನ್ನೆ ರಾಜ್ಯ ಸರ್ಕಾರದ ವತಿಯಿಂದ ಬೆಂಗಳೂರಿನಲ್ಲಿ ಸನ್ಮಾನಿಸಲಾಯಿತು.
ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರಚಂದ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಮತ್ತಿತರ ಗಣ್ಯರು ಪಾಲ್ಗೊಂಡಿದ್ದರು.

ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗಡೆ ನೂಕು ನುಗ್ಗಲು ಉಂಟಾಗಿ, ಕಾಲ್ತುಳಿತದಿಂದ 11 ಮಂದಿ ಸಾವನ್ನಪ್ಪಿ, 40ಕ್ಕೂ ಅಧಿಕ ಮಂದಿ ಗಾಯಗೊಂಡಿದ್ದಾರೆ. ಗಾಯಗೊಂಡವರನ್ನು ವೈದೇಹಿ, ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಕೆಲವರ ಸ್ಥಿತಿ ಗಂಭೀರವಾಗಿದೆ.

ಆಸ್ಪತ್ರೆಗೆ ಭೇಟಿ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ವಿಪಕ್ಷ ನಾಯಕರು ಗಾಯಾಳುಗಳ ಆರೋಗ್ಯ ವಿಚಾರಿಸಿದರು ಹಾಗೂ ಮೃತರ ಕುಟುಂಬದವರಿಗೆ ಸಾಂತ್ವನ ಹೇಳಿದರು.

ನಂತರ ತುರ್ತು ಸುದ್ದಿಗೋಷ್ಠಿ ನಡೆಸಿದ ಮುಖ್ಯಮಂತ್ರಿ, ದುರ್ಘಟನೆಯಲ್ಲಿ ಸಾವನ್ನಪ್ಪಿದವರ ಕುಟುಂಬಗಳಿಗೆ ತಲಾ 10 ಲಕ್ಷ ಪರಿಹಾರ ನೀಡಲಾಗುವುದು. ಗಾಯಾಳುಗಳಿಗೆ ಉಚಿತ ಚಿಕಿತ್ಸೆ ನೀಡಲಾಗುವುದು. ದುರ್ಘಟನೆ ಕುರಿತು ನ್ಯಾಯಾಂಗ ತನಿಖೆ ನಡೆಸಲಾಗುವುದು. 15 ದಿನಗಳಲ್ಲಿ ವರದಿ ನೀಡುವಂತೆ ಸೂಚಿಸಲಾಗಿದೆ ಎಂದರು.

ಘಟನೆ ಕುರಿತು ತೀವ್ರ ಆಘಾತ ವ್ಯಕ್ತಪಡಿಸಿರುವ ಪ್ರಧಾನ ಮಂತ್ರಿ ನರೇಂದ್ರ ಮೋದಿ, ಬೆಂಗಳೂರಿನಲ್ಲಿ ನಡೆದ ದುರ್ಘಟನೆ ನಿಜಕ್ಕೂ ಹೃದಯ ವಿದ್ರಾವಕ. ಪ್ರೀತಿ ಪಾತ್ರರನ್ನು ಕಳೆದುಕೊಂಡ ಎಲ್ಲರೊಂದಿಗೆ ತಾವಿದ್ದೇವೆ. ಗಾಯಗೊಂಡವರು ಶೀಘ್ರ ಚೇತರಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಎಕ್ಸ್ ಮಾಧ್ಯಮದಲ್ಲಿ ತಿಳಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಪ್ರಲ್ಹಾದ ಜೋಶಿ, ಇದೊಂದು ದುರಂತದ ವಿಷಯ. ಜನಸಂದಣಿಯನ್ನು ಸಮರ್ಪಕವಾಗಿ  ನಿರ್ವಹಣೆ ಮಾಡದ ಪರಿಣಾಮ ಇಂತಹ ದುರ್ಘಟನೆ ನಡೆದಿದೆ. ರಾಜ್ಯ ಸರ್ಕಾರ ತನ್ನ ಜವಾಬ್ದಾರಿ ನಿರ್ವಹಿಸುವಲ್ಲಿ ವಿಫಲವಾಗಿದೆ ಎಂದು ತಿಳಿಸಿದ್ದಾರೆ.

ಪರಿಸ್ಥಿತಿಯನ್ನು ವ್ಯವಸ್ಥಿತವಾಗಿ ನಿಭಾಯಿಸಲು ಸರ್ಕಾರ ವಿಫಲವಾಗಿದೆ. ದುರ್ಘಟನೆ, ಸರ್ಕಾರದ ವೈಫಲ್ಯ ಕುರಿತು ನ್ಯಾಯಾಂಗ ತನಿಖೆ ನಡೆಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ.

*******

ರಾಜ್ಯದಲ್ಲಿರುವ ಅರಣ್ಯ ರಕ್ಷಕರಿಗೆ ಎರಡು ಸಾವಿರ ರೂಪಾಯಿಗಳ ಅಪಾಯ ಭತ್ಯೆ ನೀಡಲಾಗುವುದು ಎಂದು ಅರಣ್ಯ ಖಾತೆ ಸಚಿವ ಈಶ್ವರ್ ಖಂಡ್ರೆ ಹೇಳಿದ್ದಾರೆ.

ಮೈಸೂರಿನಲ್ಲಿ ನಿನ್ನೆ ಅರಣ್ಯ ರಕ್ಷಕರಿಗೆ ಸುರಕ್ಷತಾ ಕಿಟ್‌ಗಳನ್ನು ವಿತರಿಸಿ,  ಮಾತನಾಡಿದ ಅವರು, ಅರಣ್ಯ ರಕ್ಷಕರಿಗೆ ನೀಡಿರುವ ಕಿಟ್‌ನಿಂದ ಮಳೆಯಿಂದ ರಕ್ಷಿಸಿಕೊಳ್ಳಲು ಹಾಗೂ ಬೆಂಕಿ ನಂದಿಸಲು ಸಹಾಯವಾಗಲಿದೆ ಎಂದರು.

ಸೇನೆ ಹಾಗೂ ಪೊಲೀಸ್ ಇಲಾಖೆಯಲ್ಲಿರುವಂತೆ, ಅರಣ್ಯ ಇಲಾಖೆ ಸಿಬ್ಬಂದಿಗೂ ಕ್ಯಾಂಟೀನ್ ವ್ಯವಸ್ಥೆ ಮಾಡುವ ಚಿಂತನೆ ನಡೆದಿದೆ. ಕರ್ನಾಟಕ ಜೀವ ವೈವಿಧ್ಯ ತಾಣವಾಗಿದ್ದು, ಅರಣ್ಯ ಸಂಪತ್ತು ರಕ್ಷಣೆ ಮತ್ತು ಅಭಿವೃದ್ಧಿ ಪಡಿಸುವುದು ಸರ್ಕಾರದ ಉದ್ದೇಶ ಎಂದು ಅವರು ಹೇಳಿದರು.

*******

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ನಾಡಿನ ಜನರಿಗೆ ಭರವಸೆಯ ಬೆಳಕಾಗಿವೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಅಭಿಪ್ರಾಯಪಟ್ಟಿದ್ದಾರೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಕಲಬುರಗಿ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಆಯೋಜಿಸಿದ ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನೆ ಬಿಂಬಿಸುವ ಮಾಹಿತಿ ಮಳಿಗೆ ಪ್ರದರ್ಶನ ಉದ್ಘಾಟಿಸಿ ಮಾತನಾಡಿದ ಅವರು, ನಾಡಿನ 7 ಕೋಟಿ ಜನರ ಬದುಕು ಗಟ್ಟಿಗೊಳಿಸಲು ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಯೋಜನೆ ಜಾರಿಗೆ ತಂದಿದೆ ಎಂದು ಹೇಳಿದರು.

*******

ಇಂದಿರಾ ಕ್ಯಾಂಟಿನ್‌ಗಳಲ್ಲಿ ಬೇಯಿಸಿದ ಮೊಟ್ಟೆ ನೀಡಬೇಕು ಎನ್ನುವ ಸಾರ್ವಜನಿಕರ ಬೇಡಿಕೆ ಕುರಿತು ಸರ್ಕಾರ ಪರಿಶೀಲನೆ ನಡೆಸುತ್ತಿದೆ ಎಂದು ಪೌರಾಡಳಿತ ಮತ್ತು ಹಜ್ ಖಾತೆ ಸಚಿವ ರಹೀಂ ಖಾನ್ ಹೇಳಿದ್ದಾರೆ.

ದಾವಣಗೆರೆಯಲ್ಲಿ ಇಂದಿರಾ ಕ್ಯಾಂಟಿನ್‌ಗಳ ಪರಿಶೀಲನೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಊಟದಲ್ಲಿ ಪ್ರೋಟೀನ್ ಅತಿ ಅಗತ್ಯ, ಈ ಹಿನ್ನೆಲೆಯಲ್ಲಿ ಜನರು ಇಂದಿರಾ ಕ್ಯಾಂಟಿನ್‌ಗಳಲ್ಲಿ ಮೊಟ್ಟೆ ವಿತರಣೆಗೆ ಬೇಡಿಕೆ ಸಲ್ಲಿಸಿದ್ದಾರೆ ಎಂದರು.

ರಾಜ್ಯದಲ್ಲಿ ಹೊಸದಾಗಿ 186 ಇಂದಿರಾ ಕ್ಯಾಂಟಿನ್ ಆರಂಭಿಸುವ ಕುರಿತು ಮುಖ್ಯಮಂತ್ರಿ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದರು, ಆ ಪೈಕಿ 100 ಕ್ಯಾಂಟೀನ್ ಗಳು ಆರಂಭಗೊಂಡಿದ್ದು, ಉಳಿದವು ಮುಂದಿನ ಒಂದೆರಡು ತಿಂಗಳಲ್ಲಿ ಆರಂಭಗೊಳ್ಳಲಿವೆ ಎಂದು ಸಚಿವರು ಹೇಳಿದರು.

*******

ರೈತರು ಹಾಗೂ ಸಾರ್ವಜನಿಕರಿಗೆ ಗುಣಮಟ್ಟದ ವಿದ್ಯುತ್ ಪೂರೈಸಲು ಮೈಸೂರು ಜಿಲ್ಲೆಯಲ್ಲಿ 44 ವಿದ್ಯುತ್ ಪ್ರಸರಣ ಉಪ ಸ್ಥಾವರಗಳನ್ನು ಎರಡು ವರ್ಷದೊಳಗೆ ಪೂರ್ಣಗೊಳಿಸಲಾಗುವುದು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಇಂಧನ ಇಲಾಖೆ ಪ್ರಗತಿ ಪರಿಶೀಲನಾ ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಗುಣಮಟ್ಟದ ವಿದ್ಯುತ್ ಪೂರೈಕೆ ಸಂಬಂಧ 100 ವಿದ್ಯುತ್ ಉಪಸ್ಥಾವರಗಳನ್ನು ನಿರ್ಮಿಸಲು ಎರಡು ವರ್ಷದ ಕಾಲಮಿತಿ ನಿಗದಿಗೊಳಿಸಲಾಗಿದೆ. ಈ ಹಿನ್ನೆಲೆಯಲ್ಲಿ ಮೈಸೂರು ಜಿಲ್ಲೆಯಲ್ಲಿ 44 ವಿದ್ಯುತ್ ಉಪಸ್ಥಾವರಗಳನ್ನು ನಿರ್ಮಿಸಲಿದ್ದೇವೆ ಎಂದರು.

ರಾಜ್ಯದಲ್ಲಿ 4 ಲಕ್ಷ ಪಂಪ್ ಸೆಟ್‌ಗಳ ಪೈಕಿ 2.5 ಲಕ್ಷ ಪಂಪ್ ಸೆಟ್‌ಗಳನ್ನು ಸಕ್ರಮಗೊಳಿಸಲಾಗಿದೆ. 500 ಮೀಟರ್ ಒಳಗಿನ ಪಂಪ್‌ಸೆಟ್‌ಗಳಿಗೆ ಇಲಾಖೆಯೇ ಟ್ರಾನ್ಸ್‌ಫಾರ್ಮರ್ ಒದಗಿಸಲಿದ್ದು, 500 ಮೀಟರ್ ಹೊರಗಿನ ಪಂಪ್ ಸೆಟ್‌ಗಳಿಗೆ ಫೀಡರ್ ಸೌರೀಕರಣದ ಮೂಲಕ ವಿದ್ಯುತ್ ಪೂರೈಕೆ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

*******

ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳ ಸಮಗ್ರ ಅಭಿವೃದ್ಧಿಗೆ ಸಂಬಂಧಿಸಿದಂತೆ ಇದೇ 19 ರಂದು ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಗಿರಿಧಾಮದಲ್ಲಿ ಸಚಿವ ಸಂಪುಟ ಸಭೆ ನಡೆಯಲಿದೆ ಎಂದು ಬೆಂಗಳೂರು ಗ್ರಾಮಾಂತರ ಉಸ್ತುವಾರಿ ಸಚಿವ ಕೆ.ಎಚ್ ಮುನಿಯಪ್ಪ ತಿಳಿಸಿದ್ದಾರೆ.

ಈಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಪ್ರಾತಿನಿಧ್ಯ ಕಲ್ಪಿಸಲು ಸಂಪುಟ ಸಭೆಯಲ್ಲಿ ಚರ್ಚಿಸಲಾಗುವುದು ಎಂದರು.

ಜಿಲ್ಲೆಗೆ ಎತ್ತಿನಹೊಳೆ ಯೋಜನೆ ಜಾರಿ, ಕಾವೇರಿ ನೀರು ಪೂರೈಕೆ, ಮೆಟ್ರೋ, ಎಸ್.ಟಿ.ಪಿ ಮತ್ತು ಯು.ಜಿ.ಡಿ ಕಾಮಗಾರಿಗೆ ಅನುದಾನ, ಜಿಲ್ಲಾ ಆಸ್ಪತ್ರೆಗೆ ಅನುದಾನ, ರಸ್ತೆಗಳ ಅಭಿವೃದ್ಧಿ, ಕೆರೆಗಳ ಪುನಶ್ಚೇತನ, ಜಿಲ್ಲಾ ಕೌಶಲ್ಯ ತರಬೇತಿ ಕೇಂದ್ರ ಸ್ಥಾಪನೆ, ರಕ್ತನಿಧಿ, ರೇ ್ಮ ಸೀರೆ ಮಾರುಕಟ್ಟೆ ಸಂಕೀರ್ಣ ಸ್ಥಾಪನೆ, ದೇವನಹಳ್ಳಿ ತಾಲ್ಲೂಕಿನ ವಿಜಯಪುರ ಪಟ್ಟಣವನ್ನು ತಾಲೂಕು ಕೇಂದ್ರವಾಗಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಸಚಿವರು ತಿಳಿಸಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಇಂದು, ವಿಶ್ವ ಪರಿಸರ ದಿನ. 'ಪ್ಲಾಸ್ಟಿಕ್ ಮಾಲಿನ್ಯವನು ಹೊಡೆದೋಡಿಸೋಣ' ಎಂಬ ಧ್ಯೇಯದೊಂದಿಗೆ ವಿಶ್ವ ಪರಿಸರ ದಿನವನ್ನು ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ರಾಜ್ಯಾದ್ಯಂತ ಆಚರಿಸಲಾಗುತ್ತಿದೆ.

ಧಾರವಾಡದ ವಿವಿಧ ಮಂಗಲ ಕಾರ್ಯಾಲಯಗಳಲ್ಲಿ, ಏಕಬಳಕೆಯ ಪ್ಲಾಸ್ಟಿಕ್ ತ್ಯಾಜ್ಯ ನಿಯಂತ್ರಿಸಲು ಸ್ಟೀಲಿನ ತಾಟು, ಲೋಟ, ದೊನ್ನೆ ಹಾಗೂ ಚಮಚಗಳನ್ನು ಒದಗಿಸಿ ಮಹತ್ವದ ಕೆಲಸ ಮಾಡಿದ ಹಳ್ಳಿಗೇರಿಯ ನೇಚರ್ ಫರ್ಸ್ಟ್ ಇಕೋ ವಿಲೇಜ್‌ನ ಕಾರ್ಯಾಧ್ಯಕ್ಷ ಪಿ.ವಿ.ಹಿರೇಮಠ ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಪಿ.ವಿ.ಹಿರೇಮಠ ಧ್ವನಿ ಧ್ವನಿ–43 ಸೆಕೆಂಡ್ಸ್

<><><>

ಧಾರವಾಡ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ಇಂದು ಬೆಳಗ್ಗೆ 11 ಗಂಟೆಗೆ, ನಗರದ ಸರ್ಕಾರಿ ಚಿತ್ರಕಲಾ ಮಹಾವಿದ್ಯಾಲಯದಲ್ಲಿ ಇಂದು ಸಂಜೆ 4.30 ಕ್ಕೆ, ವನಮಹೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ.

ವಿಶ್ವ ಪರಿಸರ ದಿನದ ಹಿನ್ನೆಲೆ, ಕಳೆದ 22 ರಿಂದಲೇ ಬಾಗಲಕೋಟೆ ಜಿಲ್ಲೆಯಲ್ಲಿ ಪ್ಲಾಸ್ಟಿಕ್ ಮುಕ್ತ ಅಭಿಯಾನ ಆರಂಭಿಸಲಾಗಿದ್ದು, ಪ್ಲಾಸ್ಟಿಕ್ ತ್ಯಾಜ್ಯದಿಂದ ಆಗುವ ದು ್ಪರಿಣಾಮಗಳು ಹಾಗೂ ಇದರ ನಿರ್ಮೂಲನೆ ಮಾಡುವ ಸಂಬಂಧ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಗ್ರಾಮ ಪಂಚಾಯತಿಗಳಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ತಿಳಿಸಿದ್ದಾರೆ.

*******

ವಿಜಯನಗರ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಕೋಡಿಹಳ್ಳಿ ಗದ್ದಿಕೇರಿ ಮತ್ತು ಹಂಪಸಾಗರಗಳಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಜರುಗಿತು.

ಹಗರಿಯ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಮತ್ತು ಮುಖ್ಯಸ್ಥ ಡಾಕ್ಟರ್ ಪಾಲಯ್ಯಪಿ., ವಿಕಸಿತ ಕೃಷಿ ಸಂಕಲ್ಪ ಅಭಿಯಾನದ ಉದ್ದೇಶ ಮತ್ತು ಮಹತ್ವದ ಕುರಿತು ರೈತರಿಗೆ ಮಾಹಿತಿ ನೀಡಿದರು. ಜತೆಗೆ ಮುಂಗಾರು ಬೆಳೆಗಳಿಗೆ ಅನುಸರಿಸಬೇಕಾದ ಕ್ರಮಗಳು ಮತ್ತು ಸೂಕ್ತ ತಳಿ, ಬಿತ್ತನೆ ಬೀಜದ ಆಯ್ಕೆ, ಬೀಜೋಪಚಾರ ಹಾಗೂ ಕೃಷಿಯಲ್ಲಿನ ವಿನೂತನ ತಾಂತ್ರಿಕತೆಗಳ ಬಗ್ಗೆ ತಿಳುವಳಿಕೆ ನೀಡಿದರು.

ಕೊಪ್ಪಳ ಜಿಲ್ಲೆಯ ಹಿಟ್ನಾಳ ಗ್ರಾಮದಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ನಡೆಯಿತು. ಅಭಿಯಾನ ಕಾರ್ಯಕ್ರಮಕ್ಕೆ ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ಮುಖ್ಯಸ್ಥ ಡಾ.ಎಂ.ವಿ.ರವಿ ಚಾಲನೆ ನೀಡಿದರು.ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನಿಗಳಾದ ಡಾ.ವಾಮನಮೂರ್ತಿ,ಜೆ.ರಾಧಾ ಅಧಿಕಾರಿಗಳು ಹಾಗೂ ಕೃಷಿ ಸಖಿಯರು ರೈತರು ಭಾಗವಹಿಸಿದ್ದರು.

ಗದಗ ಜಿಲ್ಲೆ ಹುಲಕೋಟಿಯ ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ಜಿಲ್ಲೆಯ ಬನ್ನಿಕೊಪ್ಪ, ಕಡಕೋಳ, ಮಜ್ಜೂರು, ರಾಮಗಿರಿ, ಶಿಗ್ಲಿ, ಗ್ರಾಮಗಳಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಜರುಗಿತು.

ಧಾರವಾಡದ ದ್ವಿ–ದಳ ಧಾನ್ಯಗಳ ಸಂಶೋಧನಾ ಸಂಸ್ಥೆ ವಿಜ್ಞಾನಿಗಳು, ಕೃಷಿ ಇಲಾಖೆ ಸಹಾಯಕ ನಿರ್ದೇಶಕರು, ಕೃಷಿ ಅಧಿಕಾರಿಗಳು, ಕೃಷಿ ಸಖಿಯರು ಮತ್ತು ರೈತ ಮುಖಂಡರು ಅಭಿಯಾನದಲ್ಲಿ ಪಾಲ್ಗೊಂಡಿದ್ದರು.

ಕೋಲಾರ ಜಿಲ್ಲಾ ಕೃಷಿ ವಿಜ್ಞಾನ ಕೇಂದ್ರದಿಂದ, ಕೆಜಿಎಫ್ ತಾಲೂಕಿನ ವಿವಿಧ ಗ್ರಾಮ ಪಂಚಾಯತಿಗಳಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಜರುಗಿತು. ರೈತರಿಗೆ ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳ ಸಿದ್ದತೆ, ಸಾವಯವ ಗೊಬ್ಬರ, ಬೀಜೋಪಚಾರ, ಬೆಳೆ ಮತ್ತು ತಳಿಗಳ ಆಯ್ಕೆ, ಹೊಸ ತಂತ್ರಜ್ಞಾನಗಳ ಕುರಿತು ಮಾಹಿತಿ ಒದಗಿಸಲಾಯಿತು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಆರ್‌ಸಿಬಿ ತಂಡದ ವಿಜಯೋತ್ಸವ: ಸಂಭ್ರಮಾಚರಣೆ ವೇಳೆ ದುರಂತ: ಕಾಲ್ತುಳಿತಕ್ಕೆ ಸಿಕ್ಕು 11 ಸಾವು, 40ಕ್ಕೂ ಹೆಚ್ಚು ಜನರಿಗೆ ಗಾಯ.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳು ನಾಡಿನ ಜನರಿಗೆ ಭರವಸೆಯ ಬೆಳಕು– ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ.

ರಾಜ್ಯದ ವಿವಿಧೆಡೆ ವಿಕಸಿತ ಕೃಷಿ ಸಂಕಲ್ಪ ಅಭಿಯಾನ–ಅಭಿಯಾನದ ಮಹತ್ವ ಕುರಿತು ರೈತರಿಗೆ ಜಾಗೃತಿ.

ಇಂದು, ವಿಶ್ವ ಪರಿಸರ ದಿನ. ಹಲವು ವಿಧಾಯಕ ಕಾರ್ಯಕ್ರಮಗಳ ಮೂಲಕ ವಿಶ್ವ ರಾಜ್ಯಾದ್ಯಂತ ಆಚರಣೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********